ಸುದ್ದಿ ಸಿಂಚನ

‘ಅಭಿವೃದ್ಧಿ ಪರ ಮತ: ಬಿಜೆಪಿಗೆ ಜಯಭೇರಿ’



ಬೀದರ್: ಪಂಚರಾಜ್ಯ ಚುನಾವಣೆಯಲ್ಲಿ ಮತದಾರರು ನರೇಂದ್ರ ಮೋದಿ ನೇತೃತ್ವದ ಕೇಂದ್ರದ ಬಿಜೆಪಿ ಸರ್ಕಾರದ ಜನಪರ ಹಾಗೂ ಪಾರದರ್ಶಕ ಯೋಜನೆಗಳ ಆಡಳಿತಕ್ಕೆ ಜನ ಮನ್ನಣೆ ನೀಡಿದ್ದು, ಪಶ್ಚಿಮ ಬಂಗಾಳದಲ್ಲಿ ಅರಾಜಕತೆ, ಅನಾಗರಿಕತೆ, ಗುಂಡಾ ಹಾಗೂ ಜಂಗಲ್‌ರಾಜ್‌ಗೆ ಮತದಾರ ಪ್ರಭು ಸಂಪೂರ್ಣವಾಗಿ ತಿರಸ್ಕಾರ ಮಾಡಿದ್ದು, ಬರುವ ದಿನಗಳಲ್ಲಿ ಪಶ್ಚಿಮ ಬಂಗಾಳ ಸಂಪೂರ್ಣ ಅಭಿವೃದ್ಧಿ ಹೊಂದಲಿದೆ. ಪಂಚ ರಾಜ್ಯ ಚುನಾವಣೆಯಲ್ಲಿ ಬಿಜೆಪಿ ಅಭೂತ ಪೂರ್ವ ಮತಗಳನ್ನು ಪಡೆದಿದೆ. ಮತದಾರ ರಾಷ್ಟ್ರೀಯ ವಿಚಾರಗಳಿಗೆ ಬೆಂಬಲಿಸಿದ್ದು, ವಿಕಸಿತ ಭಾರತಕ್ಕೆ ಕೈ ಜೋಡಿಸಿದ್ದಾರೆ.

ಕರಾಟೆ ಚಾಂಪಿಯನ್ ಸಬಾಗೆ ಶಾಹೀನ್‌ನಿಂದ ಉಚಿತ ಶಿಕ್ಷಣ ಘೋಷಣೆ



ಬೀದರ್: ಕಿರಿಯ ವಯಸ್ಸಿನಲ್ಲೇ ಕರಾಟೆಯಲ್ಲಿ ಅಮೋಘ ಸಾಧನೆಗೈದ ಹೈದ್ರಾಬಾದ್‌ನ ಕಿಶನ್‌ಬಾಗ್‌ನ ಬಹಾದ್ದೂರಪುರದ ಸಬಾ ಮಾಹೀನ್ ಖಾಜಾ ಮೊಯಿನುದ್ದೀನ್ ಅವರಿಗೆ ಇಲ್ಲಿಯ ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹವು ಪ್ರೌಢ ಹಾಗೂ ಪದವಿಪೂರ್ವ ಶಿಕ್ಷಣ ಉಚಿತವಾಗಿ ನೀಡುವುದಾಗಿ ಘೋಷಿಸಿದೆ. ಇಲ್ಲಿಯ ಶಹಾಪುರ ಗೇಟ್ ಸಮೀಪದ ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಕಚೇರಿಗೆ ಭಾನುವಾರ ಕುಟುಂಬದ ಸದಸ್ಯರೊಂದಿಗೆ ಭೇಟಿ ನೀಡಿದ ಸಬಾ ಮಾಹೀನ್ ಅವರಿಗೆ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ಅವರು ಶೈಕ್ಷಣಿಕ ನೆರವಿನ ಭರವಸೆ ನೀಡಿದರು. ಹೈದರಾಬಾದ್‌ನ ಗ್ರೇಸ್ ಎಕ್ಸೆಲ್ ಶಾಲೆಯಲ್ಲಿ ಏಳನೇ ತರಗತಿಯಲ್ಲಿ ಅಗ್ರಶ್ರೇಣಿಯಲ್ಲಿ ತೇರ್ಗಡೆಯಾಗಿರುವ ಸಬಾ ಮಾಹೀನ್ ತೆಲಂಗಾಣ ರಾಜ್ಯಮಟ್ಟದ ಕರಾಟೆ ಸ್ಪರ್ಧೆಯಲ್ಲಿ 22, ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಮೂರು ಚಿನ್ನದ ಪದಕ ಜಯಿಸಿದ್ದಾರೆ. ಮೇ 8 ರಿಂದ 10 ರ ವರೆಗೆ ಮಲೇಷ್ಯಾದಲ್ಲಿ ನಡೆಯಲಿರುವ 22ನೇ ವಿಶ್ವ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿನಿ ತಂದೆ ಖಾಜಾ ಮೊಯಿನುದ್ದೀನ್, ಕೋಚ್ ಮಾಸ್ಟರ್ ಮೊಹಮ್ಮದ್ ಉಮರ್ ಇದ್ದರು.

ವಕೀಲರ ಸಂಘಕ್ಕೆ ಆಯ್ಕೆ: ಮಠಪತಿಗೆ ಸನ್ಮಾನ



ಬೀದರ್: ಜಿಲ್ಲಾ ವಕೀಲರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಸಂಜಯ್ ಮಠಪತಿ ಅವರನ್ನು ನಗರದ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಇರುವ ಜಿಲ್ಲಾ ವಕೀಲರ ಸಂಘದ ಕಚೇರಿಯಲ್ಲಿ ವಿವಿಧ ಸಂಘ-ಸಂಸ್ಥೆಗಳಿಂದ ಸೋಮವಾರ ಸನ್ಮಾನಿಸಲಾಯಿತು. ಮೈಸೂರು ಪೇಟ ತೊಡಿಸಿ, ಹೂಮಾಲೆ ಹಾಕಿ ಜಗದ್ಗುರು ಪಂಚಾಚಾರ್ಯರ ಭಾವಚಿತ್ರ ನೀಡಿ ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿದ ಸಂಜಯ್ ಮಠಪತಿ ಮಾತನಾಡಿ, ವಕೀಲರ ಆಶೀರ್ವಾದದಿಂದ ಸಂಘದ ಅಧ್ಯಕ್ಷನಾಗಿ ಸೇವೆ ಸಲ್ಲಿಸುವ ಅವಕಾಶ ಸಿಕ್ಕಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ ಮಾತನಾಡಿದರು. ಜಿಲ್ಲಾ ವಕೀಲರ ಸಂಘದ ನಿಕಟಪೂರ್ವ ಅಧ್ಯಕ್ಷ ಷಣ್ಮುಕಯ್ಯ ಸ್ವಾಮಿ, ಮುಖಂಡರಾದ ವರದಯ್ಯ ಸ್ವಾಮಿ, ಮಹೇಶ ಪಾಟೀಲ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ನಿರ್ದೇಶಕ ಪ್ರವೀಣ್ ಸ್ವಾಮಿ, ಅಭಿಲಾಶ್, ಅಂಬರೀಷ್ ಕಮಠಾಣೆ, ಹಣಮಂತ ಭಂಗೂರೆ, ಶ್ರೀಕಾಂತ ಸ್ವಾಮಿ ಹೊನ್ನಿಕೇರಿ, ಪ್ರಶಾಂತ ಸ್ವಾಮಿ ಹೊನ್ನಿಕೇರಿ ಮತ್ತಿತರರು ಇದ್ದರು.

ಜಲಕ್ಷಾಮ ಆತಂಕ: ಟ್ಯಾಂಕರ್‌ನಿಂದ ನೀರು ನಿಲ್ಲಿಸದಿರಿ

ಕುಡಿಯುವ ನೀರಿನ ಸಮಸ್ಯೆ ಕುರಿತು ಸಚಿವ ಖಂಡ್ರೆ ಸಭೆ | ನೀರು ಸರಬರಾಜಿಗೆ ಅಡ್ಡಿ ಮಾಡುವವರ ವಿರುದ್ಧ ಕೇಸ್ ದಾಖಲಿಸಲು ಸೂಚನೆ

• **ಕನ್ನಡಪ್ರಭ ವಾರ್ತೆ** ಬೀದರ್

ಜಲಕ್ಷಾಮ ಎದುರಿಸುತ್ತಿರುವ ಗ್ರಾಮ ಹಾಗೂ ತಾಂಡಾಗಳಲ್ಲಿ ಮೇ ತಿಂಗಳಾಂತ್ಯದವರೆಗೆ ನೀರಿನ ಸಮಸ್ಯೆ ತೀವ್ರವಾಗ ಬಹುದಾಗಿದೆ. ಸಮಸ್ಯಾತ್ಮಕ ಸ್ಥಳಗಳಿಗೆ ಅಧಿಕಾರಿಗಳು ಟ್ಯಾಂಕರ್ ಮೂಲಕ ನೀರು ಸರಬರಾಜು ಮುಂದುವರಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿ, ತೀರ ಅಗತ್ಯವಿದ್ದಲ್ಲಿ ಮಾತ್ರ ಹೊಸ ಕೊಳವೆ ಬಾವಿ ಕೊರೆಯಿಸಿ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಔರಾದ್, ಭಾಲ್ಕಿ, ಬಸವಕಲ್ಯಾಣ, ಕಮಲನಗರ ತಾಲೂಕಿನಲ್ಲಿ ಹೆಚ್ಚಿನ ನೀರಿನ ಸಮಸ್ಯೆ ಕಂಡುಬಂದಿದೆ. ಔರಾದ್‌ನ 14 ಗ್ರಾಮಗಳು ಕಮಲನಗರ 11, ಬಸವಕಲ್ಯಾಣ 10, ಭಾಲ್ಕಿಯ 8 ಗ್ರಾಮ ಸೇರಿದಂತೆ 43 ಗ್ರಾಮಗಳಲ್ಲಿ ಸದ್ಯಕ್ಕೆ ನೀರು ಸಮಸ್ಯೆ ಉಲ್ಬಣಗೊಂಡಿದೆ ಎಂದು ಹೇಳಿದರು.

ಔರಾದ್‌ನ ತಾಂಡಾಗಳಲ್ಲಿ ಹೆಚ್ಚಿನ ಸಮಸ್ಯೆ ಕಂಡು ಬಂದಿದೆ. ನೀರಿನ ಮಟ್ಟ 700 ರಿಂದ 800 ಅಡಿವರೆಗೆ ಕುಸಿದಿದೆ. ಅಧಿಕಾರಿ ಗಳು ಕೊಳವೆಬಾವಿ ಪುನಶ್ಚೇತನ ಕಾರ್ಯಕೈಗೊಳ್ಳಬೇಕು. ಫ್ಲಶಿಂಗ್ ಹಾಗೂ ಆಳ ಹೆಚ್ಚಳ ಕಾರ್ಯ ಕೈಗೊಳ್ಳ ಬೇಕೆಂದು ತಿಳಿಸಿದರು.

ಸಮಸ್ಯಾತ್ಮಕ ಗ್ರಾಮಗಳ ವಾರ್ಡಗಳಲ್ಲಿ ಸ್ಥಳೀಯ ತಹಸೀಲ್ದಾರರು, ತಾಲೂಕು ಪಂಚಾಯತ್ ಇಒ, ಪಿಡಿಒ ಹಾಗೂ ಗ್ರಾಮ ಲೆಕ್ಕಾಧಿಕಾರಿ ಬೆಳಿಗ್ಗೆ ಓಡಾಡಿ ನೀರು ಸರಬರಾಜು ಸ್ಥಿತಿಯನ್ನು ನಿಭಾಯಿಸಿ ನೇರವಾಗಿ ಮೋಟಾರು ಹಚ್ಚಿಕೊಳ್ಳುವವರ ಸರಬರಾಜು ಕಡಿತಗೊಳಿಸುವಂತೆ ಮತ್ತು ಗ್ರಾಮಗಳ ಅವಶ್ಯಕತೆಗನುಗುಣವಾಗಿ ಕಾರ್ಯನಿರ್ವಹಿಸಿ ಟ್ಯಾಂಕರ್ ಸರಬರಾಜು ಮಾಡುವುದರ ಬಿಲ್‌ಗಳನ್ನು ಸಕಾಲದಲ್ಲಿ ಪಾವತಿಸುವಂತೆ ಸೂಚಿಸಿದರು.



ಬಸವಕಲ್ಯಾಣದಲ್ಲಿ ಅನುಭವ ಮಂಟಪ ಕಾಮಗಾರಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸೋಮವಾರ ವೀಕ್ಷಣೆ ಮಾಡಿದರು.

ಪ್ರಕರಣ ದಾಖಲಿಸಿ :

ಬೇಸಿಗೆಯ ತಾಪದ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರು ಸರಬರಾಜಿಗೆ ಕ್ರಮ ಕೈಗೊಳ್ಳಿ. ಸರ್ಕಾರದ ಅನುದಾನದಿಂದ ಖಾಸಗಿ ಜಮೀನಿನಲ್ಲಿ ಕೊರೆಯಿಸಿದ ಕೊಳವೆ ಭಾವಿ ಅಥವಾ ತೆರೆದ ಬಾವಿಯಿಂದ ಕುಡಿಯುವ ನೀರು ಸರಬರಾಜಿಗೆ ಯಾವುದೇ ರೀತಿಯ ಅಡ್ಡಿಯನ್ನುಂಟು ಮಾಡುವವರು ಎಷ್ಟೇ ಪ್ರಭಾವಿಯಾಗಿರಲಿ ಅವರ ವಿರುದ್ಧ ಅಧಿಕಾರಿಗಳು ಪ್ರಕರಣ ದಾಖಲಿಸುವಂತೆ ಅವರು ಸೂಚಿಸಿದರು.

ಸದ್ಯಕ್ಕೆ ಮೇವಿನ ಕೊರತೆ ಇರುವುದಿಲ್ಲ. ಮುಂದಿನ 24 ವಾರಗಳಿಗೆ ಆಗುವಷ್ಟು ಮೇವು ದಾಸ್ತಾನು ಇದೆ. ಜಾನುವಾರುಗಳಿಗೆ ನೀರು ಸಮಸ್ಯೆ ಆಗದಂತೆ ಕಾರಂಜಾ ಹಾಗೂ ಚುಳಕಿ ಜಲಾಶಯಗಳಿಂದ ನೀರು ಬಿಡಲು ಅಧಿಕಾರಿಗಳಿಗೆ ಸೂಚಿಸಿ ಮುಂಗಾರು ಕೃಷಿ ಬಿತ್ತನೆಗೆ ರೈತರಿಗೆ ಬೀಜ, ರಸಗೊಬ್ಬರಗಳ ಕೊರತೆಯಾಗದಂತೆ ಹಾಗೂ ಎಲ್ಲವನ್ನು ಈಗಲೇ ಸಿದ್ಧಪಡಿಸಿಕೊಳ್ಳುವಂತೆ ಸಚಿವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಪಂ ಸಿಇಒ ಡಾ.ಗಿರೀಶ ಬದೋಲೆ, ಮಹಾನಗರ ಪಾಲಿಕೆಯ ಆಯುಕ್ತ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



ಬಸವಕಲ್ಯಾಣದಲ್ಲಿ ಅನುಭವ ಮಂಟಪ ಕಾಮಗಾರಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸೋಮವಾರ ವೀಕ್ಷಣೆ ಮಾಡಿದರು.

ಮುಂದಿನ ಮಾರ್ಚ್ ತಿಂಗಳೊಳಗೆ ಅನುಭವ ಮಂಟಪ ಲೋಕಾರ್ಪಣೆ

• **ಕನ್ನಡಪ್ರಭ ವಾರ್ತೆ** ಬಸವಕಲ್ಯಾಣ

ಮುಂದಿನ ಮಾರ್ಚ್ ಒಳಗೆ ಅನುಭವ ಮಂಟಪ ಲೋಕಾರ್ಪಣೆಗೊಳ್ಳಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ಅನುಭವ ಮಂಟಪದ ಕಾಮಗಾರಿ ಪರಿಶೀಲಿಸಿ ನಂತರ ಮಾತನಾಡಿದ ಸಚಿವರು, ಬಸವಾದಿ ಶರಣರು ಈ ಜಗತ್ತಿನ ಸರ್ವಶ್ರೇಷ್ಠ ದಾರ್ಶನಿಕರು, ಮಹಾ ಮಾನವತಾವಾದಿಗಳು, ಕಾಯಕವೇ ಕೈಲಾಸವನ್ನು ಅಳವಡಿಸಿಕೊಂಡು ಜಗತ್ತಿಗೆ ಪ್ರಥಮ ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ನೀಡಿದರು. 770 ಕಂಬಗಳ ಮೇಲೆ 770 ಶರಣರ ವಚನಗಳನ್ನು ಕೆತ್ತಲಾಗುತ್ತಿದೆ. ವೈಜ್ಞಾನಿಕವಾಗಿ ನೆಮ್ಮದಿ ನೀಡುವಂಥ ಇಷ್ಟಲಿಂಗ ತರಬೇತಿ ಕೇಂದ್ರವನ್ನು ನಿರ್ಮಿಸಲಾಗುತ್ತಿದೆ ಎಂದರು.

ಬದುಕನ್ನು ಹಸನಗೊಳಿಸಿ ಕೊಳ್ಳಲು ವೈಚಾರಿಕ ವಚನಗಳು ಸಹ ಆಧುನಿಕ ವಿಜ್ಞಾನ ತಂತ್ರಜ್ಞಾನ ಮೂಲಕ ಐಐಟಿ ವಿಜ್ಞಾನಿಗಳ ಮೂಲಕವಾಗಿ ಜನಸಾಮಾನ್ಯರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು.

ಕಾಯಕವೇ ಕೈಲಾಸ ಎಂದು ಹೇಳಿರುವ ಶರಣರ ಜೀವನವನ್ನು ಬಿಂಬಿಸುವ ಶರಣ ಗ್ರಾಮ ನಿರ್ಮಾಣಗೊಳ್ಳುತ್ತಿದೆ ಎಂದರಲ್ಲದೆ, ಈಗಿನ ಯುವಕರಿಗೆ ಅಗತ್ಯವಾದ ಕೌಶಲ್ಯ ತರಬೇತಿ ನೀಡುವ ಕೇಂದ್ರ ಆರಂಭಿಸಲಾಗುವದು. ವೃತ್ತಿಯಲ್ಲಿ ಯಾವುದೂ ಮೇಲಿಲ್ಲ ಕೀಳಿಲ್ಲ ಎಂದು ಸಚಿವರು ತಿಳಿಸಿದರು.

ಅನುಭವ ಮಂಟಪಕ್ಕೆ ಹಣದ ಕೊರತೆ ಇಲ್ಲ, ಈವರೆಗೆ 480 ಕೋಟಿ ರು. ಖರ್ಚಾಗಿದೆ. ಮುಖ್ಯಮಂತ್ರಿಗಳು ಈ ಪೈಕಿ 280 ಕೋಟಿ ರು. ಅನುದಾನ ನೀಡಿದ್ದಾರೆ. ಉಳಿದ ಹಣವನ್ನು ಸಹ ಶೀಘ್ರವೇ ಬಿಡುಗಡೆ ಮಾಡಲಿದ್ದಾರೆ. ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿ ಸುವಂತೆ ಗುತ್ತಿಗೆದಾರರಿಗೆ ಸೂಚಿಸಲಾಯಿತು ಅಲ್ಲದೆ ಅನುಭವ ಮಂಟಪದ ಸುತ್ತಮುತ್ತಲಿನ ತ್ರಿಪುರಾಂತ ಕೆರೆ ಅಭಿವೃದ್ಧಿಗೂ ಸಚಿವರು ಈ ಸಂದರ್ಭದಲ್ಲಿ ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಅನುಭವ ಮಂಟಪದ ಸಂಯೋಜಕರಾದ ಡಾ. ಬಾಬಾಸಾಹೇಬ್ ಗಡ್ಡೆ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಕೆಲಸದ ಒತ್ತಡ; ಬಾಕಿ ವೇತನ ಬಿಡುಗಡೆ ಮಾಡಿ

ಪಿಡಿಒ ಮುಕ್ತಂ ಹುಸೇನ್ ಕರಡಿಗುಡ್ಡ ಆತ್ಮಹತ್ಯೆ ಪ್ರಕರಣದ ತನಿಖೆ ನಡೆಸಲು ಸಂಘದಿಂದ ಮನವಿ

• **ಕನ್ನಡಪ್ರಭ ವಾರ್ತೆ** ಬೀದರ್

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ಮೇಲಿನ ಅಮಾನವೀಯ ಕೆಲಸದ ಒತ್ತಡ ಹಾಗೂ ಬಾಕಿ ವೇತನ ಬಿಡುಗಡೆ ವಿಳಂಬ ಹಾಗೂ ಮಾನಸಿಕ ಕಿರುಕುಳದಿಂದಾಗಿ ಕೊತಬಾಲ ಗ್ರಾ.ಪಂ. ಪಿಡಿಒ ಮುಕ್ತಂಹುಸೇನ ಕರಡಿಗುಡ್ಡ ಅವರ ಆತ್ಮಹತ್ಯೆ ಪ್ರಕರಣದ ಸಮಗ್ರ ತನಿಖೆ ಹಾಗೂ ರಾಜ್ಯದ ಎಲ್ಲಾ ಪಿಡಿಒಗಳ ಸೇವಾ ರಕ್ಷಣೆಗೆ ಆಗ್ರಹಿಸಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಂಘದಿಂದ ಮನವಿ ಸಲ್ಲಿಸಲಾಯಿತು.

ಈ ಕುರಿತು ಪಂಚಾಯತ ರಾಜ ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಬರೆದ ಮನವಿ ಜಿಲ್ಲಾ ಪಂಚಾಯತ್ ಸಿಇಒ ಅವರಿಗೆ ರಾಜ್ಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದಿಂದ ಮನವಿ ಸಲ್ಲಿಸಿ, ಇತ್ತೀಚೆಗೆ ತಾಲ್ಲೂಕಿನ ಅಸೂಟಿ ಹಾಗೂ ಕೊತಬಾಲ ಎರಡು ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಯಾಗಿ (ಹೆಚ್ಚುವರಿ ಪ್ರಭಾರ ಸೇರಿ) ಕರ್ತವ್ಯ ನಿರ್ವಹಿಸುತ್ತಿದ 46 ವರ್ಷದ ಮುಕ್ತಂ ಹುಸೇನ ಕರಡಿಗುಡ್ಡ ಅವರು ಅತಿಯಾದ ಕೆಲಸದ ಒತ್ತಡ, ಹಿಂದಿನ ಪ್ರಕರಣವೊಂದರ ಮೇಲಿದ ಲೋಕಯುಕ್ತ ತನಿಖೆ ಹಾಗೂ ವೇತನವಿಲ್ಲದೆ ಬೇಸತ್ತು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಇಡೀ ರಾಜ್ಯದ ಪಿಡಿಒ ಸಮುದಾಯವನ್ನು ತೀವ್ರ ಆಘಾತಕ್ಕೀಡು ಮಾಡಿದೆ.



ರಾಜ್ಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದಿಂದ ಜಿಲ್ಲಾ ಪಂಚಾಯತ್ ಸಿಇಒ ಅವರಿಗೆ ಸೋಮವಾರ ಮನವಿ ಸಲ್ಲಿಸಿದರು.

ಹಿಂದೆ ಧಾರವಾಡ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾಗ ದಾಖಲಾಗಿದ್ದ ಪ್ರಕರಣದ ಹಿನ್ನೆಲೆಯಲ್ಲಿ ಅಮಾನತುಗೊಂಡು, ಕಳೆದ 8-9 ತಿಂಗಳುಗಳಿಂದ ಅವರಿಗೆ ಯಾವುದೇ ವೇತನವಾಗಿರಲಿಲ್ಲ, ಎರಡು ತಿಂಗಳುಗಳ ಹಿಂದೆಯಷ್ಟೇ ಅವರು ಕರ್ತವ್ಯ ಕ್ಕೆ ಹಾಜರಾಗಿದ್ದರು. ವೇತನವಿಲ್ಲದೆ ಸಂಸಾರ ಸಾಗಿಸಲು ಕಷ್ಟವಾಗಿ, ಅವರ ಪತ್ನಿ ಉದ್ಯೋಗ ಅರಸಿ ಬೆಂಗಳೂರಿಗೆ ಹೋಗು ವಂತಹ ಚಿಂತಾಜನಕ ಸ್ಥಿತಿ ಅವರ ಕುಟುಂಬಕೊದಗಿತ್ತು, ಸಣ್ಣ ಸಣ್ಣ ಮಕ್ಕಳ ಭವಿಷ್ಯದ ಚಿಂತೆ ಹಾಗೂ ಆರ್ಥಿಕ ಮುಗ್ಗಟ್ಟಿನಿಂದ ಅವರು ಎಷ್ಟೊಂದು ಮಾನಸಿಕ ಯಾತನೆ ಅನುಭವಿಸಿದ್ದಾರೆ ಎಂಬುದು ಅದರಿಂದ ಸ್ಪಷ್ಟವಾಗುತ್ತದೆ.

ಈ ಪ್ರಕರಣ ಕೇವಲ ಒಬ್ಬ ಅಧಿಕಾರಿಯ ದುರಂತವಲ್ಲ, ಬದಲಾಗಿ ಇಡೀ ರಾಜ್ಯದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಎದುರಿಸುತ್ತಿರುವ ನೈಜ ಮತ್ತು ಭೀಕರ ಪರಿಸ್ಥಿತಿಗೆ ಹಿಡಿದ ಕನ್ನಡಿಯಾಗಿದೆ. ಗ್ರಾಮೀಣಾಭಿವೃದ್ಧಿಯ ಆಧಾರಸ್ತಂಭವಾ ಗಿರುವ ಪಿಡಿಒಗಳು ಇಂದು ತೀವ್ರವಾದ ಕೆಲಸದ ಒತ್ತಡದಲ್ಲಿ ನಲುಗಿ ಹೋಗುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಅಕಾಲಿಕ ಸಾವುಗಳ ಕುರಿತು ಅಧ್ಯಯನ ಮಾಡಲು ಕಳೆದ ಒಂದು ವರ್ಷದ ಹಿಂದೆ ಮಿನಾಕ್ಷಿ ಸುಂದರಂ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿತು. ಆದರೆ ಈ ಸಮಿ ತಿಯು ಇದು ವರೆಗೂ ಸರ್ಕಾರಕ್ಕೆ ವರದಿ ಸಲ್ಲಿಸಿರುವುದಿಲ್ಲ. ನೌಕರರ ಜೀವದ ಜೊತೆ ಚೆಲ್ಲಾಟವಾಡುತ್ತಿರುವ ಇಂತಹ ವ್ಯವಸ್ಥಿತ ಒತ್ತಡಗಳನ್ನು ತಡೆಯಲು ಈ ವರದಿ ಅತ್ಯಂತ ಅವಶ್ಯಕವಾಗಿದೆ ಎಂದಿದ್ದಾರೆ.

ಪಿಡಿಒ ಸಾವಿನ ಸಮಗ್ರ ತನಿಖೆ ಹಾಗೂ ಪರಿಹಾರ ನೀಡಬೇಕು, ಒತ್ತಡ ರಹಿತ ಕೆಲಸದ ವಾತಾವರಣ ನಿರ್ಮಾಣ ಮಾಡಬೇಕು, ಹಿರಿಯ ಅಧಿಕಾರಿಗಳಿಂದ ಸಹಕಾರ ಸಿಗಬೇಕು, ಸೇರಿದಂತೆ ಇನ್ನಿತರ ಬೇಡಿಕೆಗಳ ಮನವಿ ಸಲ್ಲಿಸಿದರು.

ಈ ವೇಳೆ ರಾಜ್ಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಶರತಕುಮಾರ ಅಭಿಮಾನ ಸೇರಿದಂತೆ ಜಿಲ್ಲೆಯ ಪಿಡಿಒಗಳಿದ್ದರು.

ಸಂಸ್ಕಾರ, ಮೌಲ್ಯಗಳು ಶಿಕ್ಷಣದಷ್ಟೇ ಪ್ರಮುಖ

ವಸಂತ ವಿಹಾರ ಶಿಬಿರಕ್ಕೆ ಚಾಲನೆ ನೀಡಿ ಸ್ವಾಮಿ ಸುಮೇಧಾನಂದ ಮಹಾರಾಜ ಪ್ರತಿಪಾದನೆ

• **ಕನ್ನಡಪ್ರಭ ವಾರ್ತೆ** ಬೀದರ್

ಮಕ್ಕಳ ಭವಿಷ್ಯದ ದೃಷ್ಟಿಯಿಂದ ಪಾಲಕರು ಶಿಕ್ಷಣದಷ್ಟೇ ಮಹತ್ವ ಸಂಸ್ಕಾರ, ಮೌಲ್ಯಗಳಿಗೂ ನೀಡುವುದು ಅನಿವಾರ್ಯವಾಗಿದೆ ಎಂದು ವಿಜಯನಗರ (ಹೊಸಪೇಟೆ) ರಾಮಕೃಷ್ಣ ಗೀತಾಶ್ರಮದ ಅಧ್ಯಕ್ಷರಾದ ಸ್ವಾಮಿ ಸುಮೇಧಾನಂದ ಮಹಾರಾಜ ಹೇಳಿದರು.

ಇಲ್ಲಿನ ಶಿವನಗರದ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಹಮ್ಮಿಕೊಂಡ 8 ದಿನದ ವಸಂತ ವಿಹಾರ ವಸತಿಯುತ ಶಿಬಿರಕ್ಕೆ ಭಾನುವಾರ ಸಂಜೆ ಚಾಲನೆ ನೀಡಿ ಮಾತನಾಡಿದ ಅವರು, ಇಂದಿನ ಆಧುನಿಕ ಯುಗದಲ್ಲಿ ಮಕ್ಕಳಿಗೆ ಸಂಸ್ಕಾರ, ಮೌಲ್ಯ, ನೈತಿಕ ಪಾಠ ಸಿಗುವುದು ತೀರ ಕಮ್ಮಿಯಾಗಿದೆ. ದೇಶದ ಭವಿಷ್ಯವಾದ ಮಕ್ಕಳು ಮುಂದೆ ಅಡ್ಡ ಹಾದಿ ಹಿಡಿಯುವುದಕ್ಕೆ ಇದರ ಕೊರತೆಯೇ ಕಾರಣವಾಗುತ್ತಿದೆ.

ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳು ಕೇವಲ ಪಾಠಪುಸ್ತಕಗಳ ಜ್ಞಾನಕ್ಕೆ ಮಾತ್ರ ಸೀಮಿತವಾಗಬಾರದು. ಶಿಕ್ಷಣ ವ್ಯಕ್ತಿಗೆ ಉದ್ಯೋಗ ಕೊಡಬಹುದು, ಆದರೆ ಸಂಸ್ಕಾರವು ಅವನಿಗೆ ವ್ಯಕ್ತಿತ್ವ ಕೊಡುತ್ತದೆ. ಮೌಲ್ಯಗಳು, ನೈತಿಕತೆಗಳೇ ವ್ಯಕ್ತಿಯ ಜೀವನದ ಸಾರ್ಥಕತೆ ನಿರ್ಧರಿಸುತ್ತವೆ ಎಂಬುದು ಯಾರೂ ಮರೆಯಕೂಡದು ಎಂದು ಸಲಹೆ ನೀಡಿದರು.

ಮಕ್ಕಳ ಚಾರಿತ್ರ್ಯ ನಿರ್ಮಾಣವೇ ವಸಂತ ವಿಹಾರ ಶಿಬಿರದ ಉದ್ದೇಶವಾಗಿದೆ. ಶಾರೀರಿಕ, ಮಾನಸಿಕ ಬೆಳವಣಿಗೆ ಜೊತೆಗೆ ಆಧ್ಯಾತ್ಮಿಕ ಚಿಂತನೆಗೂ ಇಲ್ಲಿ ಪ್ರಾಮುಖ್ಯತೆ ನೀಡಲಾಗುತ್ತಿದೆ. ಯೋಗ, ಧ್ಯಾನ, ಪ್ರಾರ್ಥನೆ, ಕ್ರೀಡೆ, ವ್ಯಕ್ತಿತ್ವ ವಿಕಸನ ತರಗತಿ, ಸಾಂಸ್ಕೃತಿಕ ಚಟುವಟಿಕೆಗಳು ಮಕ್ಕಳ ಸಮಗ್ರ ವಿಕಾಸಕ್ಕೆ ಬುನಾದಿ ಹಾಕುತ್ತವೆ ಎಂದರು.

ಶಿಬಿರದ ರೂವಾರಿ ಬೀದರ್ ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಜ್ಯೋತಿರ್ಮಯಾನಂದ ಮಹಾರಾಜ ಸಾನ್ನಿಧ್ಯ ವಹಿಸಿ ಮಾತನಾಡಿ, ಮೌಲ್ಯಗಳೇ ಜೀವನಕ್ಕೆ ನಿಜವಾದ ಬೆಳಕು ನೀಡುತ್ತವೆ. ಬಾಹ್ಯ ಲೋಕಗೆಲ್ಲುವುದಕ್ಕಿಂತ ಮೊದಲು ನಿಮ್ಮೊಳಗಿನ ಮನಸ್ಸನ್ನು ಗೆಲ್ಲಿರಿ. ಇದೇ ಉನ್ನತತೆಗೆ ಒಯ್ಯುತ್ತದೆ ಎಂದರು.

ಸ್ವಾಮಿ ಸುಮೇಧಾನಂದ ಮಹಾರಾಜ ಅವರ ಭಜನ, ಸಂಗೀತ ಸಭಿಕರಿಗೆ ಆಧ್ಯಾತ್ಮ ಲೋಕದಲ್ಲಿ ತೇಲಿಸಿತು. ಆಶ್ರಮದ ಭಕ್ತರು ಇದ್ದರು. ಶಿಬಿರ ಮೇ 10 ರಂದು ಮುಗಿಯಲಿದೆ. ಸೋಮವಾರ ಮಧ್ಯಾಹ್ನದವರೆಗೂ 3 ರಿಂದ 9ನೇ ತರಗತಿವರೆಗಿನ ಮಕ್ಕಳಿಗೆ ಶಿಬಿರಕ್ಕೆ ಸೇರಿಸಲು ಅವಕಾಶವಿದೆ.

ಸಂಸ್ಕಾರವಿಲ್ಲದ ಜ್ಞಾನವು ಸಮಾಜಕ್ಕೆ ಅಪಾಯಕಾರಿ!: ಅಂಕ ಹಾಗೂ ಪದವಿಗಳೇ ಜೀವನದ ಯಶಸ್ಸನ್ನು ನಿರ್ಧರಿಸುವುದಿಲ್ಲ. ಕಮ್ಮಿ ಅಂಕ ಹಾಗೂ ಅಲ್ಪ ಪದವಿ ಹೊಂದಿದ ಅನೇಕರು ವಿಶ್ವವೇ ತಿರುಗಿ ನೋಡುವಂಥ ಅಗಾಧ ಸಾಧನೆ ಮಾಡಿರುವ ಅಸಂಖ್ಯ ಉದಾಹರಣೆ ನಮ್ಮಲ್ಲಿವೆ. ಜ್ಞಾನವು ದೀಪದಂತೆ, ಆದರೆ ಅದಕ್ಕೆ ಬೆಳಕು ನೀಡುವುದೇ ಸಂಸ್ಕಾರ. ಸಂಸ್ಕಾರವಿಲ್ಲದ ಜ್ಞಾನ ಸಮಾಜಕ್ಕೆ ಅಪಾಯಕಾರಿಯಾಗ ಬಹುದು ಎಂದು ಸ್ವಾಮಿ ಜ್ಯೋತಿರ್ಮಯಾನಂದ ಮಹಾರಾಜ ಹೇಳಿದರು.

ಸಂಪತ್ತು, ಹುದ್ದೆ, ಅಧಿಕಾರವೆಲ್ಲವೂ ತಾತ್ಕಾಲಿಕ. ಆದರೆ ಚಾರಿತ್ರ್ಯ ಶಾಶ್ವತವಾಗಿದೆ. ಇಂದಿನ ಯುವಜನತೆ ವಿವಿಧ ಪ್ರಲೋಭನೆಗಳಿಗೆ ಒಳಗಾಗಿ ದಾರಿ ತಪ್ಪುತ್ತಿರುವುದು ಆತಂಕಕಾರಿ ಬೆಳವಣಿಗೆ. ಇದರಿಂದ ಹೊರ ಬರಲು ಆತ್ಮನಿಗ್ರಹ ಮತ್ತು ನೈತಿಕ ಮೌಲ್ಯಗಳೇ ಪರಿಹಾರ ಎಂದು ಪ್ರತಿಪಾದಿಸಿದರು.

ವೈಜ್ಞಾನಿಕ ಸಂಶೋಧನಾ ಪರಿಷತ್ತಿಗೆ ದಾನಿ ನೇಮಕ

ಗೌರವಾಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆ; ಹರ್ಷ

• **ಕನ್ನಡಪ್ರಭ ವಾರ್ತೆ** ಬೀದರ್

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಗೌರವಾಧ್ಯಕ್ಷರಾಗಿ ಬಾಬುರಾವ್ ದಾನಿ ಅವರು ಸರ್ವಾನುಮತ ದಿಂದ ಆಯ್ಕೆಯಾಗಿದ್ದಕ್ಕೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹರುಷ ವ್ಯಕ್ತಪಡಿಸಿದೆ.



ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ಸೂಲಿಬೆಲೆಯಲ್ಲಿ ಕಾರ್ಮಿಕ ದಿನಾಚರಣೆ ಪ್ರಯುಕ್ತ ‘ಕಾಯಕ ಯೋಗಿ-26’ ಪ್ರಶಸ್ತಿ ಪ್ರದಾನ ಸಮಾರಂಭ ದಿನದಂದು ನಡೆದ ಕಾರ್ಯಕಾರಿ ಸಭೆಯಲ್ಲಿ ಈ ನಿರ್ಣಯ ತೆಗೆದುಕೊಳ್ಳಲಾದ ಬಗ್ಗೆ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷರಾದ ಹುಲಿಕಲ್ ನಟರಾಜವರು ಅಧಿಕೃತ ಪತ್ರ ನೀಡಿದ್ದಾರೆ.

ಶಿಕ್ಷಣ, ಸಮಾಜ, ವಿಶೇಷವಾಗಿ ವೈಜ್ಞಾನಿಕ ಕ್ಷೇತ್ರದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಅವಿರತ ಶ್ರಮಿಸುತ್ತಿರುವ ದಾನಿ ಬಾಬುರಾವ್ ಅವರು ಪ್ರೌಢಶಾಲಾ ಶಿಕ್ಷಕರಾಗಿ ‘ರಾಜ್ಯ ಮಟ್ಟದ ಉತ್ತಮ ಶಿಕ್ಷಕ’ ಪ್ರಶಸ್ತಿಗೆ ಭಾಜನರಾದವರು. ಶಿಕ್ಷಕ ವೃತ್ತಿಯೊಂದಿಗೆ ಕಳೆದ ನಾಲ್ಕು ದಶಕಗಳಿಂದ ಸಮಾಜೋ ಸಾಂಸ್ಕೃತಿಕ ಬದುಕಿನ ಸೇವೆಯಲ್ಲಿ ಅಹರ್ನಿಶಿ ತೊಡಗಿಸಿಕೊಂಡವರು. ವೃತ್ತಿ ಜೀವನದಿಂದ ನಿವೃತ್ತರಾದರೂ ಸಾಮಾಜಿಕ, ವೈಜ್ಞಾನಿಕ ಸೇವೆ ನಿರಂತರವಾಗಿವೆ. ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಕೋಶಾಧ್ಯಕ್ಷರಾಗಿ, ನಿರ್ದೇಶಕರಾಗಿ, ಕಾರ್ಯಕಾರಿಣಿ ಸದಸ್ಯರಾಗಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನ ಮಂಡಳಿ ನವದೆಹಲಿ ಕಾರ್ಯಕಾರಿಣಿ ಸದಸ್ಯರಾಗಿ, ಜಿಲ್ಲಾ ವಿಜ್ಞಾನ ಸಮಿತಿಯ ಗೌರವ ಕಾರ್ಯದರ್ಶಿಯಾಗಿ, ಉಪಪ್ರಾದೇಶಿಕ ವಿಜ್ಞಾನ ಕೇಂದ್ರದ ಪ್ರಧಾನ ಕಾರ್ಯದರ್ಶಿಯಾಗಿ, ಜಿಲ್ಲಾ ಪರಿಸರ ವಾಹಿನಿ ಗೌರವ ಸಲಹೆಗಾರರಾಗಿ, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಉಪಾಧ್ಯಕ್ಷ ರಾಗಿ, ಪಂಚಾಕ್ಷರಿ ಗವಾಯಿ ಸೇವಾ ಸಂಸ್ಥೆಯ ಪ್ರಧಾನ ಕಾರ್ಯದರ್ಶಿಯಾಗಿ ಹೀಗೆ ಆಯಾ ಹುದ್ದೆಗಳಿಗೆ ಗೌರವ ತಂದು ಕೊಟ್ಟವರು. ದಾನಿ ಬಾಬುರಾವ್ ಅವರು ಪ್ರಶಸ್ತಿ, ಗೌರವ ಪುರಸ್ಕಾರಗಳಿಗೆ ಭಾಜನರಾದವರು. ದಾನಿ ಬಾಬುರಾವ್ ಆಯ್ಕೆಯ ಬಗ್ಗೆ ಡಾ. ರಜನೀಶ ವಾಲಿ, ಕಸಾಪ ಜಿಲ್ಲಾಧ್ಯಕ್ಷ ಸುರೇಶ ಚೆನಶೆಟ್ಟಿ, ಕಾರ್ಯದರ್ಶಿ ಎಂಎಸ್ ಮನೋಹರ, ಕೋಶಾಧ್ಯಕ್ಷ ಡಾ. ಶಿವಶಂಕರ ಟೋಕರೆ, ತಾಲೂಕು ಕಸಾಪ ಅಧ್ಯಕ್ಷ ಟಿಎಂ ಮಚ್ಚೆ, ಶಿವಕುಮಾರ ಕಟ್ಟೆ, ಬಸವರಾಜ ಬಲ್ಲೂರ, ಡಾ.ಸತೀಶ ಮುಡಬಿ, ದೇವಿ ಪ್ರಸಾದ್ ಕಲಾಲ್ ಪರಮೇಶ್ವರ್, ಸಂತೋಷ ಮಂಗಳೂರೆ, ನರಸಾರೆಡ್ಡಿ ಮತ್ತಿತರರು ಹರ್ಷ ವ್ಯಕ್ತಪಡಿಸಿದರು.

ಕುತ್ತಾಬಾದ್‌ನಲ್ಲಿ ಮಾಜಿ ಸೈನಿಕನಿಗೆ ಹೃದಯಸ್ಪರ್ಶಿ ಸನ್ಮಾನ; ಮೆರವಣಿಗೆ

ಸೇವಾ ನಿವೃತ್ತಿ ನಿಮಿತ್ತ ಶ್ರೀಕಾಂತ ಬಶೆಟ್ಟಿಗೆ ಗೌರವ



ಬೀದರ್ ತಾಲ್ಲೂಕಿನ ಕುತ್ತಾಬಾದ್ ಗ್ರಾಮದಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ನಿವೃತ್ತ ಸೈನಿಕ ಶ್ರೀಕಾಂತ ಬಶೆಟ್ಟಿ ಮಾತನಾಡಿದರು

• **ಕನ್ನಡಪ್ರಭ ವಾರ್ತೆ** ಬೀದರ್

ಭಾರತೀಯ ಸೇನೆಯ ಸೇವೆಯಿಂದ ನಿವೃತ್ತರಾದ ತಾಲ್ಲೂಕಿನ ಕುತ್ತಾಬಾದ್ ಗ್ರಾಮದ ಶ್ರೀಕಾಂತ ಕಂಟೆಪ್ಪ ಬಶೆಟ್ಟಿ ಅವರನ್ನು ಗ್ರಾಮದಲ್ಲಿ ಭಾನುವಾರ ಹೃದಯ ಸ್ಪರ್ಶಿಯಾಗಿ ಸನ್ಮಾನಿಸಲಾಯಿತು.

ಗ್ರಾಮಸ್ಥರು ಶ್ರೀಕಾಂತ ಅವರನ್ನು ಬೀದರ್‌ನಿಂದ ಅಲಂಕೃತ ತೆರೆದ ಜೀಪ್‌ನಲ್ಲಿ ಮೆರವಣಿಗೆಯಲ್ಲಿ ಗ್ರಾಮಕ್ಕೆ ಕರೆ ತಂದರು. ಪಟಾಕಿ, ಹೂ ಮಳೆ ಸುರಿಸಿ ಭವ್ಯವಾಗಿ ಸ್ವಾಗತಿಸಿ ಬರಮಾಡಿಕೊಂಡರು. ಬಳಿಕ ಅಭಿನಂದನಾ ಸಮಾರಂಭದಲ್ಲಿ ಶಾಲು ಹೊದಿಸಿ, ಬೃಹತ್ ಹೂಮಾಲೆ ಹಾಕಿ ಸನ್ಮಾನಿಸಿದರು.

ದೇಶ ಸೇವೆ ಮಾಡುವ ಅವಕಾಶ ಎಲ್ಲರಿಗೂ ಸಿಗದು. ಆ ಭಾಗ್ಯ ದೊರೆತದ್ದು ನನ್ನ ಸೌಭಾಗ್ಯ. ನಮ್ಮ ಪೂರ್ವಜರ ಪುಣ್ಯದ ಫಲ ಎಂದು ಸನ್ಮಾನ ಸ್ವೀಕರಿಸಿದ ಶ್ರೀಕಾಂತ ಬಶೆಟ್ಟಿ ಹೇಳಿದರು.

ಭಾರತೀಯ ಸೇನೆಯಲ್ಲಿ 24 ವರ್ಷ ಸಲ್ಲಿಸಿದ ಸೇವೆ ನನಗೆ ತೃಪ್ತಿ ತಂದಿದೆ. ದೇಶಕ್ಕಾಗಿ ಸೇವೆ ಸಲ್ಲಿಸಿದ ಹೆಮ್ಮೆ ಹಾಗೂ ಅಭಿಮಾನ ನನಗಿದೆ ಎಂದು ತಿಳಿಸಿದರು. ಪ್ರತಿಯೊಬ್ಬರೂ ದೇಶ ಪ್ರೇಮ, ದೇಶಾಭಿಮಾನ ಬೆಳೆಸಿಕೊಳ್ಳಬೇಕು. ದೇಶದ ಸುರಕ್ಷತೆ ಹಾಗೂ ಅಖಂಡತೆ ಕಾಪಾಡಲು ಸದಾ ಕಂಕಣ ಬದ್ಧರಾಗಿರಬೇಕು ಎಂದು ಹೇಳಿದರು.

ಯುವಕರು ಸೇನೆಯಲ್ಲಿ ಸೇವೆ ಮಾಡಲು ಮುಂದೆ ಬರಬೇಕು ಎಂದರು.

ಪ್ರಭಾಕರ ಬಶೆಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಶ್ರೀಕಾಂತ ಬಶೆಟ್ಟಿ ಅವರ ದೇಶಪ್ರೇಮ ಮಾದರಿಯಾಗಿದೆ ಎಂದು ತಿಳಿಸಿದರು. ಪ್ರತಿಮಾ ಶ್ರೀಕಾಂತ ಬಶೆಟ್ಟಿ, ಓಂಕಾರ ಬಶೆಟ್ಟಿ, ದರ್ಶನ್ ಬಶೆಟ್ಟಿ, ಸಾಕ್ಷಿ ಬಶೆಟ್ಟಿ, ರೇಖಾ ಸಂತೋಷ್ ಬಶೆಟ್ಟಿ, ಮಾಜಿ ಸೈನಿಕ ಝುರೆಪ್ಪ ಹವಾಲ್ದಾರ್, ಮುಖಂಡರಾದ ಮಲ್ಲಯ್ಯ ಸ್ವಾಮಿ, ಶಿವಕುಮಾರ ತುಂಗಾ, ವೀರೇಶ ರಾಜಗೀರೆ, ಯೋಗೇಂದ್ರ ಯದಲಾಪುರೆ, ಸಂತೋಷ್ ಬಶೆಟ್ಟಿ, ಜಗನ್ನಾಥ ವಾಲ್ದೊಡ್ಡಿ, ಅಶೋಕ ತಮಗೊಂಡ, ಶಾದುಲ್ ನನ್ನುಮಿಯ, ಡಾ. ರಾಜಕುಮಾರ ರಾಂಪುರೆ, ಚಂದ್ರಕಾಂತ ಶಿವಗೊಂಡ ಸೇರಿದಂತೆ ಕುತ್ತಾಬಾದ್, ಯದಲಾಪುರ, ಅಯಾಸಪುರ, ಟಿ. ಮರ್ಜಾಪುರ ಸೇರಿದಂತೆ ವಿವಿಧೆಡೆಯ ಜನ ಪಾಲ್ಗೊಂಡಿದ್ದರು.

ಹರ್ಷೋದ್ಗಾರ | ಮನ್ನಾಏಖೇಳ್ಳಿಯಲ್ಲಿ ಶಾಸಕ ಶೈಲೇಂದ್ರ ಬೆಲ್ದಾಳೆ ನೇತೃತ್ವದಲ್ಲಿ ವಿಜಯೋತ್ಸವ

ಮೂರು ರಾಜ್ಯಗಳಲ್ಲಿ ಬಿಜೆಪಿ ಜಯಭೇರಿ; ಸಂಭ್ರಮಾಚರಣೆ

• **ಕನ್ನಡಪ್ರಭ ವಾರ್ತೆ** ಬೀದರ್

ದೇಶದ ಮೂರು ಪ್ರಮುಖ ರಾಜ್ಯಗಳಲ್ಲಿ ಬಿಜೆಪಿ ಜಯಭೇರಿ ಗೆಲುವು ಸಾಧಿಸಿದಕ್ಕೆ ಬೀದರ್‌ದಕ್ಷಿಣ ಕ್ಷೇತ್ರದ ಮನ್ನಾಏಖೇಳ್ಳಿ ಗ್ರಾಮದಲ್ಲಿ ಸೋಮವಾರ ಸಂಭ್ರಮಾಚರಣೆ ಮಾಡಲಾಯಿತು.

ಪ್ರಮುಖ ರಾಜ್ಯಗಳಾದ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಜೆಜೆಪಿ (ಎನ್‌ಡಿಎ) ಐತಿಹಾಸಿಕ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ, ಬೀದರ್‌ದಕ್ಷಿಣ ಕ್ಷೇತ್ರದ ಮನ್ನಾಏಖೇಳ್ಳಿ ಗ್ರಾಮದಲ್ಲಿ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರ ನೇತೃತ್ವದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಭರ್ಜರಿ ವಿಜಯೋತ್ಸವ ಆಚರಿಸಿದರು.

ಈ ಸಂದರಭದಲ್ಲಿ ಮಾತನಾಡಿದ ಶಾಸಕರು, ದೇಶದ ಪ್ರಧಾನಿ ನರೇಂದ್ರ ಮೋದಿ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಹಾಗೂ ದೇಶದ ಗೃಹ ಸಚಿವರಾದ ಅಮಿತ್ ಶಾ ಸೇರಿದಂತೆ ಅನೇಕ ನಾಯಕರ ಮತ್ತು ಕಾರ್ಯಕರ್ತರ ಪರಿಶ್ರಮದ ಫಲವಾಗಿ ಇಂದು ಮೂರು ರಾಜ್ಯಗಳಲ್ಲಿ ಈ ಭರ್ಜರಿ ಜಯ ಸಾಧಿಸಲು ಸಾಧ್ಯವಾಗಿದೆ. ಇಂದು ನಾವು ಆಚರಿಸುತ್ತಿರುವ ಈ ವಿಜಯೋತ್ಸವ ಕೇವಲ ಗೆಲುವಿನ ಸಂಭ್ರಮವಲ್ಲ ಇದು ಜನರ ಸೇವೆಗೆ ಸಿಕ್ಕ ಗೌರವ ಇದು ಉತ್ತಮ ಆಡಳಿತಕ್ಕೆ ಸಿಕ್ಕ ಮನ್ನಣೆ ಇದಾಗಿದೆ ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಸಹ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಬೀದರ್‌ದಕ್ಷಿಣ ಕ್ಷೇತ್ರದ ಮನ್ನಾಏಖೇಳ್ಳಿ ಗ್ರಾಮದಲ್ಲಿ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಅವರ ನೇತೃತ್ವದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಭರ್ಜರಿ ವಿಜಯೋತ್ಸವ ಆಚರಿಸಿದರು.

ಬಳಿಕ ಗ್ರಾಮದಲ್ಲಿ ಪಟಾಕಿ ಸಿಡಿಸಿ ಸಂಭ್ರಮ ವ್ಯಕ್ತಪಡಿಸಲಾಯಿತು. ಅಲ್ಲದೆ ಸಿಹಿ ಹಂಚುವ ಮೂಲಕ ಪರಸ್ಪರ ಶುಭಾಶಯ ಗಳನ್ನು ವಿನಿಮಯ ಮಾಡಿಕೊಂಡರು.

ಪಕ್ಷದ ಮಂಡಲ ಅಧ್ಯಕ್ಷ ಗುರುನಾಥ ರಾಜಗೀರ, ಮುಖಂಡರಾದ ರಾಜರೆಡ್ಡಿ ಶಾಬಾದ, ಝುರೆಪ್ಪಾ ಹಂದಿಕೇರಾ, ಬಸವರಾಜ ಬೋರಾಳ, ರವಿ ಬಾಲೆಬಾಯಿ, ರಾಜಕುಮಾರ ಪಾಂಚಾಳ, ಜಗನಾಥ್ ಮಜಗೆ, ಹೇಮಾ ತುಕ್ಕಾರೆಡ್ಡಿ, ಸಂತೋಷಿ ನಿಡವಂಚಾ, ಶಿಲ್ಪಾ ಭಕ್ತಕುಮಾರ, ಸುಜಾತಾ, ಸುನೀತಾ ಮಂಗಲಗಿ, ತಾಜೋದ್ದಿನ್, ವಿನೋದ ಕೋಟೆ. ಮಹಾದೇವ ಚಾಮಾ, ಸೈಯದ್ ಅಬೆದ್ ಅಲಿ, ಸಂಗ್ರಾಮ

ದೇಶದ ಸುರಕ್ಷತೆಗೆ ಬಿಜೆಪಿಯ ಕೈಹಿಡಿದ ಬಂಗಾಳ ಮತದಾರರು: ಶಾಸಕ ಬೆಲ್ದಾಳೆ

ಬೀದರ್: ಪಶ್ಚಿಮ ಬಂಗಾಳದಲ್ಲಿ ಮೊದಲ ಬಾರಿ ಬಿಜೆಪಿ ಭರ್ಜರಿ ಜಯ ಬಾರಿಸಿದೆ. ಬಂಗಾಳ ಮಾತ್ರವಲ್ಲ, ದೇಶದ ಆಂತರಿಕ ಹಾಗೂ ಬಾಹ್ಯ ಸುರಕ್ಷತೆಯ ದೃಷ್ಟಿಯಿಂದ ಮತದಾರರು ಬಿಜೆಪಿ ಕೈ ಹಿಡಿದಿದ್ದಾರೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ ಹಾಗೂ ಬೀದರ್‌ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಹೇಳಿದ್ದಾರೆ. ಪಂಚ ರಾಜ್ಯಗಳ ಚುನಾವಣೆ ಫಲಿತಾಂಶದಲ್ಲಿ ಮತದಾರರು ಬಿಜೆಪಿಗೆ ಭರಪೂರ ಸಾಥ್ ನೀಡಿ, ಪಕ್ಷದ ಮೇಲಿನ ವಿಶ್ವಾಸವನ್ನು ಮತ್ತಷ್ಟು ಗಟ್ಟಿಗೊಳಿಸಿದ್ದಾರೆ. 15 ವರ್ಷದಿಂದ ಬಂಗಾಳದಲ್ಲಿ ಟಿಎಂಸಿಯ ಮಮತಾ ಬ್ಯಾನರ್ಜಿ ಸಂಪೂರ್ಣ ಜಾತಿ ಆಧಾರದಲ್ಲಿ ದಬ್ಬಾಳಿಕೆ ಆಡಳಿತ ನಡೆಸುತ್ತಿದ್ದರು. ವೋಟಿನಾಸೆಗಾಗಿ ಅಕ್ರಮ ಬಾಂಗ್ಲಾ ನುಸುಳುಕೋರರಿಗೆ ರೆಡ್ ಕಾರ್ಪೆಟ್ ಹಾಕಿದ್ದರು ಎಂದು ವ್ಯಾಖ್ಯಾನಿಸಿದ್ದಾರೆ. ಅಸ್ಸಾಂನಲ್ಲಿ ಬಿಜೆಪಿ ಹಾಗೂ ಪುದುಚೇರಿಯಲ್ಲಿ ಎನ್‌ಡಿಎ ಮತ್ತೆ ಅಧಿಕಾರಕ್ಕೆ ಬರುತ್ತಿದೆ. ಬರುವ ಚುನಾವಣೆಗಳಲ್ಲಿ ಬಿಜೆಪಿ ಭರ್ಜರಿ ಜಯಕ್ಕೆ ಇದು ದಿಕ್ಸೂಚಿಯಾಗಿದೆ ಎಂದು ಹೇಳಿದ್ದಾರೆ.